ಆ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಮತ್ತು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ 1980ರ ನಂತರ ಒತ್ತುವರಿಗಳಾಗಿರುವ ಅರಣ್ಯ ಭೂಮಿಯನ್ನು ಸಕ್ರಮಗೊಳಿಸಲು ಅವಕಾಶವಿರುವುದಿಲ್ಲ. 1980 ನಂತರ ಅರಣ್ಯ ಒತ್ತುವರಿಯಾಗಿರುವ ಹಾಗೂ ಈ ಒತ್ತುವರಿಯು ಕೃಷಿ ಮತ್ತು ವಾಸಕ್ಕಾಗಿ (ಜೀವನಾಧಾರಕ್ಕಾಗಿ) ಉಪಯೋಗಿಸುತ್ತಿರುವುದರಿಂದ ಈ ಒತ್ತುವರಿಗಳನ್ನು ಸಕ್ರಮಗೊಳಿಸಲು ಅರಣ್ಯ (ಸಂರಕ್ಷಣಾ) ಕಾಯ್ದೆ 1980ರ ಮಾರ್ಗಸೂಚಿಗಳಿಗೆ ಸೂಕ್ತ ತಿದ್ದುಪಡಿಯನ್ನು ಮಾಡಲು ಕೇಂದ್ರ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸನ್ನು ಮಾಡುವಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಮುಂದೆ ಐ.ಎ. ಸಲ್ಲಿಸಿದೆ. ಕೇಂದ್ರ ಸರ್ಕಾರವನ್ನು ಸಹ 1980ರ ನಂತರ ಅರಣ್ಯ ಒತ್ತುವರಿಯಾಗಿರುವ ಅರ್ಹ ಪ್ರಕರಣಗಳನ್ನು ಸಕ್ರಮಗೊಳಿಸಲು ಮಾರ್ಗಸೂಚಿಯನ್ನು ಸಡಿಲಿಸಲು ಕೋರಲಾಗಿತ್ತು. ಕೇಂದ್ರ ಸರ್ಕಾರವು ಈ ಪ್ರಸ್ತಾವನೆಯನ್ನು ತಿರಸ್ಕರಿಸಿದ್ದು, ಇದನ್ನು ಪುನರ್‌ಪರಿಶೀಲಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ.

...

309 (420) : ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅರಣ್ಯ ರಕ್ಷಿತ ಜಮೀನನ್ನು ಸಾಗುವಳಿದಾರರು ಆಕ್ರಮಣ ಮಾಡಿಕೊಂಡ ಪ್ರಕರಣಗಳನ್ನು ಸಕ್ರಮೀಕರಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೆ;

ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು;

ಇ) ಆಕ್ರಮಿಸಿಕೊಂಡ ಜಮೀನನ್ನು ತೆರವುಗೊಳಿಸುವ ಬಗ್ಗೆ ಸರ್ಕಾರ ಆದೇಶ ಹೊರಡಿಸಲು ಉದ್ದೇಶಿಸಿದೆಯೆ;

ಈ) ಪುನರ್ ಪರಿಶೀಲನಾ ಅರ್ಜಿಯನ್ನು ಸುಪ್ರೀಂಕೋರ್ಟ್‌ಗೆ ಸಲ್ಲಿಸಲಾಗಿದೆಯೆ;

ಉ) ಕುಂದಾಪುರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಜನರು ಅರಣ್ಯ ರಕ್ಷಿತ ಜಮೀನನ್ನು ಆಕ್ರಮಣ ಮಾಡಿಕೊಂಡಿರುತ್ತಾರೆ ಹಾಗೂ ಆ ಜಮೀನಿನ ವಿಸ್ತೀರ್ಣ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಆ) ಅರಣ್ಯ ಭೂಮಿ ಅತಿಕ್ರಮಣಗಳು ದಿನಾಂಕ: 27–4–78ರ ಪೂರ್ವದ್ದಾಗಿರುವುದೆಂದು ಗುರುತಿಸಿರುವ ಎಲ್ಲಾ ಪ್ರಕರಣಗಳನ್ನು ಸರ್ಕಾರಿ ಆದೇಶ ಸಂಖ್ಯೆ: ಅಪಜೀ 5 ಎಫ್‌ಜಿಎಲ್ 90, ದಿನಾಂಕ: 5–5–97ರಂತೆ ಸಕ್ರಮಗೊಳಿಸಲು ಜಿಲ್ಲಾಧಿಕಾರಿಯವರು ಕ್ರಮ ಕೈಗೊಳ್ಳುತ್ತಿದ್ದಾರೆ. ಆದರೆ 1978ರ ನಂತರದ ಅರಣ್ಯ ಭೂಮಿ ಅತಿಕ್ರಮಗಳನ್ನು ಪ್ರಸ್ತುತ ಅರಣ್ಯ ಕಾಯ್ದೆ 1963 ಅರಣ್ಯ (ಸಂರಕ್ಷಣಾ) ಕಾಯ್ದೆ 1980 ಮತ್ತು ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ: 202/95 ರಲ್ಲಿ ಸ್ವೀಕೃತವಾದ ನಿರ್ದೇಶನಗಳ ಹಿನ್ನೆಲೆಯಲ್ಲಿ ತೆರವುಗೊಳಿಸುವ ಅನಿವಾರ್ಯತೆ ಇದೆ.

ಇ) ಈ ಕೆಲಸ ಶಾಸನಬದ್ಧ ಕಾನೂನು ಹಾಗೂ ಅತ್ಯುನ್ನತ ನ್ಯಾಯಾಲಯದ ಆದೇಶಗಳನ್ನು ಪಾಲಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ಈ) ಹೌದು.

ಉ) ಕುಂದಾಪುರ ವಿಧಾನ ಸಭಾಕ್ಷೇತ್ರ ವ್ಯಾಪ್ತಿಯಲ್ಲಿ 317 ರೈತರು ಅಂದಾಜು 178.625 ಹೆ. ಅರಣ್ಯ ಜಮೀನನ್ನು ಅತಿಕ್ರಮಣ ಮಾಡಿಕೊಂಡಿರುವುದನ್ನು ಗುರುತಿಸಲಾಗಿದೆ.